E: 4629772/2022
26/8

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ಆಲಮಟ್ಟಿ ಎಡದಂಡೆ ಕಾಲುವೆಯ ಕಿ.ಮೀ.0.00 ರಿಂದ 68.24 ವರೆಗಿನ (ಬಾಕಿ ಉಳಿದ) ಹಾಗೂ ವಿತರಣಾ ಕಾಲುವೆಗಳ ಸ್ಟ್ರಕ್ಚರ್ ಒಳಗೊಂಡಂತೆ ಆಧುನೀಕರಣ ಕಾಮಗಾರಿಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

***

**ಓದಲಾಗಿದೆ:-**
1. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ವ್ಯ.ನಿ./126ನೇ ಮಂಡಳಿ/ತಾಂತ್ರಿಕ-1/2020-21/2216, ದಿನಾಂಕ:06.11.2020.
2. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ವ್ಯ.ನಿ./126ನೇ ಮಂಡಳಿ/ತಾಂತ್ರಿಕ-1/2021-22/657, ದಿನಾಂಕ:08.09.2021.
3. ಸರ್ಕಾರದ ಆದೇಶ ಸಂ.: ಜಸಂಇ 138 ಕೆಬಿಎನ್ 2017, ದಿನಾಂಕ:20.09.2017.

**ಪ್ರಸ್ತಾವನೆ:-**

ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-1 & 2 ರಡಿ ನಿರ್ಮಿಸಲಾಗಿರುವ ಆಲಮಟ್ಟಿ ಎಡದಂಡೆ ಕಾಲುವೆ ಕಿ.ಮೀ.12.50 ಹಾಗೂ ನಂತರ 86.216 ಕಿ.ಮೀ. ಉದ್ದದ ಸ್ವತಂತ್ರ ಕಾಲುವೆ ಜಾಲದಿಂದ ಬರಪೀಡಿತ ಮುದ್ದೆಬಿಹಾಳ ತಾಲೂಕಿನ ಒಟ್ಟು 20,235 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿರುತ್ತದೆ.

ಆಲಮಟ್ಟಿ ಎಡದಂಡೆ ಕಾಲುವೆ ಜಾಲದಿಂದ ಸತತವಾಗಿ 13 ವರ್ಷಗಳಿಂದ ನೀರಾವರಿ/ಕುಡಿಯುವ ನೀರು ಪೂರೈಕೆಗೆ ಬಳಸಲಾಗುತ್ತಿದೆ. ಕಾಲುವೆ ಜಾಲದಲ್ಲಿ ತಳ ಮತ್ತು ಬದಿಗಳ ಲೈನಿಂಗ್, ಏರಿ ರೀಚ್ ಗಳ ಕುಸಿತ, ಅನೇಕ ಸಿ.ಡಿ. ಕಾಮಗಾರಿಗಳ ದುಸ್ಥಿತಿ ಇತ್ಯಾದಿ ಸ್ಥಳಿಯ ಕಾರಣಗಳಿಂದಾಗಿ ಕಾಲುವೆಯಿಂದ ನೀರು ವ್ಯರ್ಥವಾಗುತ್ತಿರುವುದು ಕಂಡುಬಂದಿದೆ. ಇದರಿಂದ ಕಾಲುವೆಯ ಜಾಲದಲ್ಲಿ ಸಮರ್ಪಕ ನೀರು ನಿಯಂತ್ರಣ ಹಾಗೂ ನಿರ್ವಹಣೆ ಸಾಧ್ಯಾವಾಗದೆ ನಿಗಧಿತ ಅಚ್ಚುಕಟ್ಟು ಕ್ಷೇತ್ರಕ್ಕೆ ಕಾಲುವೆ ಹಾಗೂ ಜಾಲದ ಅಂಚಿನ ಭಾಗದವರೆಗೆ ಸಮರ್ಪಕವಾಗಿ ನೀರು ಪೂರೈಸುವಲ್ಲಿ ತೊಂದರೆ ಹಾಗೂ ವ್ಯತ್ಯಯ ಉಂಟಾಗುತ್ತಿದೆ.

ಆಲಮಟ್ಟಿ ಎಡದಂಡೆ ಕಾಲುವೆಯ ಆಧುನೀಕರಣ ಕಾಮಗಾರಿಯ ಅವಶ್ಯಕತೆಯನ್ನು ಪರಿಗಣಿಸಿ, ಸರ್ಕಾರವು 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಆಲಮಟ್ಟಿ ಎಡದಂಡೆ ಕಾಲುವೆಯ ಆಧುನೀಕರಣ ಯೋಜನೆಯನ್ನು ಘೋಷಣೆ ಮಾಡಿರುತ್ತದೆ. ಈ ನಿಟ್ಟಿನಲ್ಲಿ ಈಗಾಗಲೇ ಮೇಲೆ ಓದಲಾದ (3) ರ ಸರ್ಕಾರ ಆದೇಶದಲ್ಲಿ ಆಲಮಟ್ಟಿ ಎಡದಂಡೆ ಮುಖ್ಯ ಕಾಲುವೆ ಕಿ.ಮೀ. 0.00 ರಿಂದ 68.24 ವರೆಗಿನ (ಹಾಳಾಗಿರುವ ಆಯ್ದ ಭಾಗಗಳ) ಹಾಗೂ ವಿತರಣಾ ಕಾಲುವೆಗಳ ಸ್ಟ್ರಕ್ಚರ್ ಒಳಗೊಂಡ ಆಧುನೀಕರಣ ಕಾಮಗಾರಿಯ ರೂ.112.46 ಕೋಟಿ ಅಂದಾಜು ಮೊತ್ತದ (2016-17ನೇ ಸಾಲಿನ ದರಪಟ್ಟಿರನ್ವಯ) ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಸದರಿ ಆಡಳಿತಾತ್ಮಕ ಅನುಮೋದನೆ ಮೇರೆಗೆ ಈಗಾಗಲೇ ಆಲಮಟ್ಟಿ ಎಡದಂಡೆ ಮುಖ್ಯ ಕಾಲುವೆಯ ಕಿ.ಮೀ. 0.00 ರಿಂದ 68.24 ವರೆಗಿನ (ಆಯ್ದ ಭಾಗಗಳ) ಸ್ಟ್ರಕ್ಚರ್ ಒಳಗೊಂಡಂತೆ ಆಧುನೀಕರಣದ ಪ್ಯಾಕೇಜ್ ಕಾಮಗಾರಿಯನ್ನು ಟೆಂಡರ್ ಆಧಾರದ ಮೇಲೆ ಗುತ್ತಿಗೆ ವಹಿಸಿದ್ದು, ಕಾಮಗಾರಿ ಪೂರ್ಣಗೊಂಡಿರುತ್ತದೆ. ಮುಂದುವರೆದು, ಕಿ.ಮೀ.0.00 ರಿಂದ 68.24 ವರೆಗಿನ (ಆಯ್ದ ಭಾಗಗಳ) ವಿತರಣಾ ಕಾಲುವೆಗಳ ಆಧುನೀಕರಣದ ಕಾಮಗಾರಿಗಳನ್ನು 3 ಪ್ಯಾಕೇಜ್ ಗಳಲ್ಲಿ ಗುತ್ತಿಗೆ ವಹಿಸಿದ್ದು ಕಾಮಗಾರಿ ಪ್ರಗತಿಯಲ್ಲಿರುತ್ತದೆ.

ಮೇಲೆ ಓದಲಾದ (1) ಮತ್ತು (2) ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ರವರು ಆಲಮಟ್ಟಿ ಎಡದಂಡೆ ಕಾಲುವೆ ಜಾಲದಡಿ ಈಗಾಗಲೇ ಕೈಗೆತ್ತಿಕೊಂಡಿರುವ ಸುಮಾರು 30 ಕಿ.ಮೀ. ಮುಖ್ಯ ಕಾಲುವೆ ಜಾಲದ ಅಧುನೀಕರಣ ಹೊರತುಪಡಿಸಿ, ಇನ್ನುಳಿದ 56 ಕಿ.ಮೀ. ಕಾಲುವೆ ಜಾಲದ ಅಧುನೀಕರಣ ಕಾಮಗಾರಿಗಳ ರೂ.75.42 ಕೋಟಿ ಮೊತ್ತದ ಪ್ರಸ್ತಾವನೆಯನ್ನು

ಸಲ್ಲಿಸಿದ್ದು, ಸದರಿ ಆಧುನೀಕರಣ ಕಾಮಗಾರಿ ಪೂರ್ಣಗೊಂಡಲ್ಲಿ ಕಾಲುವೆಯ ಕೊನೆಯ ಭಾಗದವರೆಗೆ ನಿಗದಿತ ಅಚ್ಚುಕಟ್ಟು ಕ್ಷೇತ್ರಕ್ಕೆ ನೀರು ಹರಿಸಲು ಅನುಕೂಲವಾಗುವುದು ಎಂದು ಮುಖ್ಯ ಇಂಜಿನಿಯರ್, ಅಣೆಕಟ್ಟು ವಲಯ, ಆಲಮಟ್ಟಿ ರವರು ತಿಳಿಸಿರುದಾಗಿ ವರದಿ ಮಾಡಿರುತ್ತಾರೆ.

ಮುಂದುವರೆದು, ಕೃಷ್ಣಾ ಭಾಗ್ಯ ಜಲ ನಿಗಮದ ದಿನಾಂಕ:05.10.2020 ರಂದು ಜರುಗಿದ 126ನೇ ನಿಗಮದ ನಿರ್ದೇಶಕರ ಮಂಡಳಿಯ ಸಭೆಯ ಮುಂದೆ ಆಲಮಟ್ಟಿ ಎಡದಂಡೆ ಕಾಲುವೆಯ ಕಿ.ಮೀ. 0.00 ರಿಂದ 68.24 ವರೆಗಿನ (ಬಾಕಿ ಉಳಿದ) ಕಾಲುವೆ ಜಾಲದ ಆಧುನೀಕರಣ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಮಂಡಳಿಯು ಈ ಕೆಳಗಿನಂತೆ ಅನುಮೋದಿಸಿರುತ್ತದೆ ಎಂದು ವರದಿ ಮಾಡಿರುತ್ತಾರೆ.

*"ಮಂಡಳಿಯು ಸದರಿ ವಿಷಯದ ಬಗ್ಗೆ ವಿವರಣಾತ್ಮಕ ಕಾರ್ಯಸೂಚಿಯನ್ನು ಅವಗಾಹಿಸಿ, ಸಭೆಯು ಸದರಿ ವಿಷಯದ ಕುರಿತು ಅವಲೋಕಿಸಿ, ಚರ್ಚಿಸಿದಂತೆ ಅಂದಾಜು ಪರಿಶೀಲನಾ ಸಮಿತಿಯು ಷರತ್ತುಗಳೊಂದಿಗೆ ಮಾಡಿರುವ ಶಿಫಾರಸ್ಸಿನಂತೆ ಆಲಮಟ್ಟಿ ಎಡದಂಡೆ ಕಾಲುವೆಯ ಕಿ.ಮೀ. 0.00 ರಿಂದ 68.24 ವರೆಗಿನ (ಬಾಕಿ ಉಳಿದ) ಕಾಲುವೆ ಜಾಲದ ಆಧುನೀಕರಣ ಕಾಮಗಾರಿಯ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ಕೋರಿ ರೂ.7541.60 ಲಕ್ಷಗಳ (2018-19ನೇ ಸಾಲಿನ ದರಪಟ್ಟಿಯನ್ವಯ) ಅಂದಾಜು ಮೊತ್ತದ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಮಂಡಳಿ ಸಭೆ ಅನುಮೋದಿಸಿರುತ್ತದೆ".*

ಅದರಂತೆ, ಸದರಿ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ರವರು ಆಲಮಟ್ಟಿ ಎಡದಂಡೆ ಕಾಲುವೆಯ ಕಿ.ಮೀ. 0.00 ರಿಂದ 68.24 ವರೆಗಿನ (ಬಾಕಿ ಉಳಿದ) ಕಾಲುವೆ ಜಾಲದ ಆಧುನೀಕರಣ ಕಾಮಗಾರಿಗಳನ್ನು ರೂ.7541.60 ಲಕ್ಷಗಳ (2018-19ನೇ ಸಾಲಿನ ದರಪಟ್ಟಿ) ಅಂದಾಜು ಮೊತ್ತದಲ್ಲಿ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತದಿಂದ ಕೈಗೆತ್ತಿಕೊಳ್ಳಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಇ-ಸಂಖ್ಯೆ:ಜಸಂಇ 209 ಕೆಬಿಎನ್ 2020, ಬೆಂಗಳೂರು, ದಿನಾಂಕ:07.01.2022**

ಆಲಮಟ್ಟಿ ಎಡದಂಡೆ ಕಾಲುವೆ ಕಿ.ಮೀ. 0.00 ರಿಂದ 68.24 ವರೆಗಿನ (ಬಾಕಿ ಉಳಿದ) ಕಾಲುವೆ ಜಾಲದ ಹಾಗೂ ವಿತರಣಾ ಕಾಲುವೆಗಳ ಸ್ಟ್ರಕ್ಚರ್ ಒಳಗೊಂಡಂತೆ ಆಧುನೀಕರಣ ಕಾಮಗಾರಿಯ ರೂ.7541.60 ಲಕ್ಷ ಅಂದಾಜು ಮೊತ್ತದ (2018-19ನೇ ಸಾಲಿನ ದರಪಟ್ಟಿಯನ್ವಯ) ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 100 ಆಕೋ-1/2021(ಇ-ಆಫೀಸ್), ದಿನಾಂಕ:18.10.2021 ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 31 ಎಂಸಿಎಂ 2021-ಪಿಪಿಡಿ, ದಿನಾಂಕ:18.11.2021 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

7/1/2022

(ರವೀಂದ್ರ ಕೊಂಡ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

1. ಮಹಾಲೇಖಪಾಲರು (ಎ&ಇ) / (ಇ&ಆರ್.ಎಸ್.ಎ) / (ಜಿ&ಎಸ್.ಎಸ್.ಎ), ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು
9. ಮುಖ್ಯ ಇಂಜಿನಿಯರ್, ಕೃ.ಭಾ.ಜ.ನಿ. ಅಣೆಕಟ್ಟು ವಲಯ, ಆಲಮಟ್ಟಿ.
10. ವಿಶೇಷಾಧಿಕಾರಿಗಳು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ, (ಲೋ.ಆಕೋ) ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ) (ಪ್ರಕರಣ ಸಂಖ್ಯೆ. ಸಿ-504/2021), ವಿಧಾನ ಸೌಧ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿ (ಕೃ.ಭಾ.ಜ.ನಿ) ಜಲ ಸಂಪನ್ಮೂಲ ಇಲಾಖೆ, ಬೆಂಗಳೂರು.
13. ಶಾಖಾ ಸಹಾಯಕರು-6, ಜಲ ಸಂಪನ್ಮೂಲ ಇಲಾಖೆ.
14. ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿಗಳು.